ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಅ/ಬ್ಯಾ.ವಿ/ಆ.ಅ/ 161 /2017-18.

ಕಾರ್ಯಪಾಲಕ ಅಭಿಯಂತರವರ ಕಛೇರಿ
ಬ್ಯಾಟರಾಯನಪುರ, ಬೃ.ಬೆಂ.ಮ.ಪಾ.
ಬೆಂಗಳೂರು-92
ದಿನಾಂಕ: 17/01/2018

ಆಡಳಿತಾತ್ಮಕ ಅನುಮೋದನೆ

ವಿಷಯ:- Improvements to Sanitary works at Manjunatha layout, Nagawara, Nagawara colony in ward No.06, Thanisandra.

ಉಲ್ಲೇಖ:- ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ , ಕಾಮಗಾರಿ ಸಂಕೇತ: 006-18-000024

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ಉಪವಿಭಾಗ) ರವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದಲ್ಲಿ **P3295 14th Finance Commission Works - UGD Works"** ರ ಅಡಿಯಲ್ಲಿ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು ಮೇಲ್ಕಂಡ ಕಾಮಗಾರಿಯನ್ನು ರೂ. 75.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಸದರಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011-12 ದಿನಾಂಕ:02-09-2015ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ ಹಾಗೂ ಆಡಳಿತಾತ್ಮಕ ಅನುಮೋದನೆ ಪುಸ್ತಕ ಕ್ರ.ಸಂ 161 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
2. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
3. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
4. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

17/01

ಕಾರ್ಯಪಾಲಕ ಅಭಿಯಂತರರು
ಬ್ಯಾಟರಾಯನಪುರ ವಿಭಾಗ
ಬಿ.ಬಿ.ಎಂ.ಪಿ ಬೆಂಗಳೂರು-92

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ. 17/01
2. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ಉಪವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ, ಸೂಕ್ತ ಕ್ರಮಕ್ಕಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.